# ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ

**6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-03.**

ಸಂಖ್ಯೆ :81605/ KSEAB/DOE/X1(EXAM)/9/2025-X-SEC ದಿನಾಂಕ:31/10/2025.

## ಸುತ್ತೋಲೆ

ವಿಷಯ: ಡಿಸೆಂಬರ್-2025ರ ಮಾಹೆಯಲ್ಲಿ ನಡೆಯಲಿರುವ ಡ್ರಾಯಿಂಗ್ ಗ್ರೇಡ್ ಪರೀಕ್ಷೆಗೆ ಆನ್‌ಲೈನ್ ಮೂಲಕ ಅರ್ಜಿಗಳನ್ನು ನೋಂದಾಯಿಸುವ ದಿನಾಂಕವನ್ನು ವಿಸ್ತರಿಸುವ ಬಗ್ಗೆ.

ಉಲ್ಲೇಖ:01. ಈ ಕಛೇರಿ ಅಧಿಸೂಚನೆ ಸಂಖ್ಯೆ:75659/KSEAB/DOE/X1(EXAM)/6/2025- X-SEC ದಿನಾಂಕ: 09/09/2025.

02. ಈ ಕಛೇರಿ ಸುತ್ತೋಲೆ ಸಂಖ್ಯೆ:75659/KSEAB/DOE/X1(EXAM)/6/2025-X-SEC ದಿನಾಂಕ:15/10/2025.

***********

ಮೇಲಿನ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ, ಡಿಸೆಂಬರ್-2025ರ ಮಾಹೆಯಲ್ಲಿ ನಡೆಯಲಿರುವ ಡ್ರಾಯಿಂಗ್ ಗ್ರೇಡ್ ಪರೀಕ್ಷೆಗೆ ಆನ್‌ಲೈನ್ ಮೂಲಕ ಅರ್ಜಿಗಳನ್ನು ನೋಂದಾಯಿಸಲು ದಿನಾಂಕ:15/10/2025ರಿಂದ 31/10/2025ರ ವರೆಗೆ ಅವಕಾಶ ಕಲ್ಪಿಸಲಾಗಿತ್ತು.

ಮುಂದುವರೆದು ರಾಜ್ಯದ ಹಲವು ಜಿಲ್ಲೆಗಳ ನೋಡಲ್ ಅಧಿಕಾರಿಗಳು ಹಾಗೂ ಚಿತ್ರಕಲಾ ಶಿಕ್ಷಕರು ದೂರವಾಣಿ ಮೂಲಕ ಮತ್ತು ಕರ್ನಾಟಕ ರಾಜ್ಯ ಚಿತ್ರಕಲಾ ಸಂಘ (ರಿ) ಬೆಂಗಳೂರು ಇವರ ಮನವಿಯಲ್ಲಿ ಆನ್‌ಲೈನ್ ಅರ್ಜಿ ಸಲ್ಲಿಸುವ ದಿನಾಂಕವನ್ನು ವಿಸ್ತರಿಸುವಂತೆ ಕೋರಿರುತ್ತಾರೆ. ಅದುದರಿಂದ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಹಾಗೂ ಇದುವರೆಗೂ ನಿರೀಕ್ಷಿತ ಪ್ರಮಾಣದಲ್ಲಿ ಅರ್ಜಿಗಳು ನೋಂದಾವಣಿ ಆಗದ ಹಿನ್ನೆಲೆಯಲ್ಲಿ ಆನ್‌ಲೈನ್ ಅರ್ಜಿಗಳನ್ನು ನೋಂದಾಯಿಸುವ ಹಾಗೂ ದಾಖಲೆಗಳನ್ನು ಸಲ್ಲಿಸುವ ದಿನಾಂಕಗಳನ್ನು ಈ ಕೆಳಗಿನಂತೆ ವಿಸ್ತರಿಸಲಾಗಿದೆ.

| ಕ್ರ.ಸಂ | ವಿವರ | ಈಗಾಗಲೇ ನಿಗದಿಪಡಿಸಿದ ದಿನಾಂಕ | ವಿಸ್ತರಣೆ ಮಾಡಿದ ದಿನಾಂಕ |
|---|---|---|---|
| 01 | ಮಂಡಲಿ ಜಾಲತಾಣದ UDISE Login ಮೂಲಕ ಅಭ್ಯರ್ಥಿಗಳ ಮಾಹಿತಿ ಅಪ್‌ಲೋಡ್ ಮಾಡಲು ಅಂತಿಮ ದಿನಾಂಕ | 31/10/2025 | 15/11/2025 |
| 02 | ಶಾಲಾ ಮುಖ್ಯಸ್ಥರು ಸಲ್ಲಿಸಿದ ನಾಮಿನಲ್ ರೋಲ್ ಮತ್ತು ಸಂಬಂಧಿಸಿದ ಇತರ ದಾಖಲೆಗಳನ್ನು ಡಯಟ್ ಲಾಗಿನ್ ನಲ್ಲಿ ಉಪನಿರ್ದೇಶಕರು (ಅಭಿವೃದ್ಧಿ) ರವರು ಅನುಮೋದಿಸುವುದು. | 01/11/2025 ರಿಂದ 05/11/2025 | 17/11/2025 ರಿಂದ 21/11/2025 |
| 03 | ಮಂಡಲಿ ಜಾಲತಾಣದಲ್ಲಿ ಸಂಬಂಧಿಸಿದ UDISE Login ಮೂಲಕ ಅಭ್ಯರ್ಥಿಗಳ ಪರೀಕ್ಷಾ ಶುಲ್ಕವನ್ನು ಆನ್‌ಲೈನ್ (Debit Card/Credit Card/Net Banking) ಮೂಲಕ ಆನ್‌ಲೈನ್ ಮೂಲಕ ಪಾವತಿಸುವುದು. | 01/11/2025 ರಿಂದ 06/11/2025 | 17/11/2025 ರಿಂದ 22/11/2025 |
| 04 | ಶಾಲಾ ಮುಖ್ಯಸ್ಥರು ನಾಮಿನಲ್ ರೋಲ್, ಮತ್ತು ಸಂಬಂಧಿಸಿದ ಇತರ ದಾಖಲೆಗಳನ್ನು ಡಯಟ್‌ಗೆ ಕಳುಹಿಸಲು ಕೊನೆಯ ದಿನಾಂಕ | 01/11/2025 ರಿಂದ 10/11/2025 | 17/11/2025 ರಿಂದ 26/11/2025 |

ಸುತ್ತೋಲೆಯಲ್ಲಿ ನಿಗದಿಪಡಿಸಿರುವ ದಿನಾಂಕಗಳನ್ವಯ ವಿದ್ಯಾರ್ಥಿಗಳಿಂದ ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ನೋಂದಣಿ ಮಾಡಲು ಹಾಗೂ ಶುಲ್ಕ ಸ್ವೀಕರಿಸಲು ತಮ್ಮ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಡ್ರಾಯಿಂಗ್ ಗ್ರೇಡ್ ಪರೀಕ್ಷೆಗೆ ಅರ್ಜಿ ಸಲ್ಲಿಸಿರುವ ಶಾಲಾ ಮುಖ್ಯಸ್ಥರ ಗಮನಕ್ಕೆ ತಂದು, ಇದರ ಸದುಪಯೋಗವನ್ನು ಪಡೆದುಕೊಳ್ಳಲು ಸಂಬಂಧಿಸಿದ ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು(ಆಡಳಿತ) ಜಿಲ್ಲಾ ಡಯಟ್ ಪ್ರಾಂಶುಪಾಲರು, ಮತ್ತು ರಾಜ್ಯದ ಎಲ್ಲಾ ತಾಲ್ಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗಳು ಅಗತ್ಯ ಕ್ರಮಕೈಗೊಳ್ಳಲು ಸೂಚಿಸಿದೆ. (ಶಾಲಾ ಮುಖ್ಯಸ್ಥರು ಸಲ್ಲಿಸಿದ ದಾಖಲೆಗಳನ್ನು ಡಯಟ್‌ನಲ್ಲೇ ಸಂರಕ್ಷಿಸಲು ತಿಳಿಸಿದೆ)

31/10/25

[ಗೋಪಾಲಕೃಷ್ಣ ಹೆಚ್ ಎನ್]

ನಿರ್ದೇಶಕರು (ಪರೀಕ್ಷೆಗಳು)

ಪ್ರತಿಗಳನ್ನು:-

1. ಮಾನ್ಯ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ನೃಪತುಂಗರಸ್ತೆ, ಬೆಂಗಳೂರು ರವರಿಗೆ ಮಾಹಿತಿಗಾಗಿ.
2. ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಧಾರವಾಡ ಮತ್ತು ಕಲಬುರಗಿ ರವರಿಗೆ ಮಾಹಿತಿಗಾಗಿ.
3. ನಿರ್ದೇಶಕರು, ಡಿ.ಎಸ್.ಇ.ಆರ್.ಟಿ, ಹೊಸಕೆರೆಹಳ್ಳಿ, ಬೆಂಗಳೂರು ಇವರಿಗೆ ಮಾಹಿತಿಗಾಗಿ.
4. ಕಾರ್ಯನಿರ್ವಾಹಣಾಧಿಕಾರಿಗಳು/ನಿರ್ದೇಶಕರು, ವಸತಿ ಶಾಲೆಗಳ ಶಿಕ್ಷಣ ಸಂಸ್ಥೆ, ಇವರಿಗೆ ಸೂಕ್ತ ಕ್ರಮಕ್ಕಾಗಿ.
5. ಮಾನ್ಯ ನಿರ್ದೇಶಕರು, ಅಲ್ಪ ಸಂಖ್ಯಾತರ ನಿರ್ದೇಶನಾಲಯ, ನಂ:16ಸಿ ಮಿಲ್ಲರ್ ಟ್ಯಾಂಕ್ ಬೆಡ್ ರಸ್ತೆ, ವಸಂತನಗರ, ಬೆಂಗಳೂರು-560052. ಇವರಿಗೆ ಸೂಕ್ತ ಕ್ರಮಕ್ಕಾಗಿ.

6. ವಿಭಾಗೀಯ ಸಹನಿರ್ದೇಶಕರು-1ಬೆಂಗಳೂರು/ಮೈಸೂರು/ಬೆಳಗಾವಿ/ಕಲಬುರಗಿ ವಿಭಾಗದವರಿಗೆ ಸೂಕ್ತ ಕ್ರಮಕ್ಕಾಗಿ.
7. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು(ಆಡಳಿತ) ಶಾಲಾ ಶಿಕ್ಷಣ ಇಲಾಖೆ, ರವರಿಗೆ ಸೂಕ್ತ ಕ್ರಮಕ್ಕಾಗಿ.
8. ರಾಜ್ಯದ ಎಲ್ಲಾ ಜಿಲ್ಲಾ ಡಯಟ್ ಪ್ರಾಂಶುಪಾಲರುಗಳಿಗೆ, ಸೂಕ್ತ ಕ್ರಮಕ್ಕಾಗಿ.
9. ರಾಜ್ಯದ ಎಲ್ಲಾ ತಾಲ್ಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ, ಸೂಕ್ತ ಕ್ರಮಕ್ಕಾಗಿ.
10. ಹಿರಿಯ ಸಹಾಯಕ ನಿರ್ದೇಶಕರು (ಚಿತ್ರಕಲೆ) ಆಯುಕ್ತರ ಕಛೇರಿ, ಬೆಂಗಳೂರು, ಅಪರ ಆಯುಕ್ತರ ಕಛೇರಿ, ಧಾರವಾಡ ಮತ್ತು ಕಲಬುರಗಿ ರವರಿಗೆ ಸೂಕ್ತ ಕ್ರಮಕ್ಕಾಗಿ.
11. ಶಾಖಾಧಿಕಾರಿಗಳು, ಗಣಕ ಶಾಖೆ ರವರಿಗೆ ಮುಂದಿನ ಅಗತ್ಯ ಕ್ರಮಕ್ಕಾಗಿ.
12. ಉನ್ನತೀಕರಿಸಿ ಹಿರಿಯ ಪ್ರಾಥಮಿಕ ಶಾಲೆ, ಸರ್ಕಾರಿ, ಅನುದಾನಿತ, ಅನುದಾನರಹಿತ, ವಸತಿ ಮತ್ತು ಅಲ್ಪ ಸಂಖ್ಯಾತರ ಪ್ರೌಢ ಶಾಲಾ ಮುಖ್ಯೋಪಾಧ್ಯಾಯರು, ಸೂಕ್ತ ಕ್ರಮಕ್ಕಾಗಿ.